29

<u>ವಿಧಾನ ಪರಿಷತ್ತಿನ ಸದಸ್ಯರಾದ ಮಾನ್ಯ ಶ್ರೀ ಎಸ್ ವಿ ಸಂಕನೂರು ಹಾಗೂ ಶ್ರೀ ಶಶೀಲ್ ಜಿ ನಮೋಶಿ ಮತ್ತು ಇತರರು ಮಂಡಿಸಿರುವ ನಿಯಮ-72ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ</u>

-

**ವಿಷಯ:-**

**ರಾಜ್ಯದ ಖಾಸಗಿ ಅನುದಾನಿತ ಪ್ರಾಥಮಿಕ, ಪ್ರೌಢ ಹಾಗೂ ಪದವಿಪೂರ್ವ ಕಾಲೇಜುಗಳಲ್ಲಿ 2006ನೇ ಸಾಲಿನ ನಂತರ ನೇಮಕಗೊಂಡ ಸಿಬ್ಬಂದಿಗೆ ಯಾವ ಪಿಂಚಣಿ ಸೌಲಭ್ಯವಿಲ್ಲದೆ ತೊಂದರೆ ಹಾಗೂ ಅನ್ಯಾಯಕ್ಕೆ ಒಳಗಾಗಿರುವ ಬಗ್ಗೆ ಪ್ರಸ್ತಾಪಿಸಿರುತ್ತಾರೆ.**

**ಉತ್ತರ:**

ದಿನಾಂಕ: 01.04.2006ರ ನಂತರ ನೇಮಕಾತಿ ಹೊಂದಿದ ಸಿಬ್ಬಂದಿಗಳಿಗೆ ಸರ್ಕಾರದ ಆದೇಶ ಸಂಖ್ಯೆ: FD (SPL)04 PET 2005 ದಿನಾಂಕ: 01.04.2006ರನ್ವಯ ನೂತನ ಪಿಂಚಣಿ ಯೋಜನೆ ಅನ್ವಯವಾಗುತ್ತದೆ. ಸರ್ಕಾರದ ಆದೇಶ ಸಂಖ್ಯೆ: :ಆಇ 34 ಪಿಇಎನ್ 2018 ರಲ್ಲಿ ಅಂಶದಾಯಿ ಪಿಂಚಣಿ ಕೊಡುಗೆ ಯೋಜನೆಯಡಿ ಬರುವ ಸರ್ಕಾರಿ ನೌಕರರಿಗೆ ನಿವೃತ್ತಿ ಉಪದಾನ, ಮರಣ ಮತ್ತು ಕುಟುಂಬ ಪಿಂಚಣಿಯನ್ನು ವಿಸ್ತರಿಸಲಾಗಿದೆ ಸರ್ಕಾರಿ ನೌಕರರ ಮೂಲ ವೇತನದಲ್ಲಿ 10% ರಷ್ಟನ್ನು ನೌಕರರ ವೇತನದಿಂದ ವಂತಿಕೆಯನ್ನು ಕಟಾಯಿಸಿ ಹಾಗೂ ನೌಕರನ ವಂತಿಕೆಯ ಅಷ್ಟೇ ಮೊತ್ತವನ್ನು [ಮೂಲವೇತನದ 10% ರಷ್ಟು] ಸರ್ಕಾರದಿಂದ ವಂತಿಕೆ ರೂಪದಲ್ಲಿ ನೀಡಲಾಗುತ್ತಿದೆ.

ದಿನಾಂಕ:01.04.2006ರ ನಂತರ ಅನುದಾನ ಸಹಿತ ಅನುಮೋದನೆಗೊಂಡ ಅನುದಾನಿತ ಖಾಸಗಿ ಶಾಲೆ/ಕಾಲೇಜುಗಳಲ್ಲಿನ ಸಿಬ್ಬಂದಿಗಳಿಗೆ ಈ ಮೇಲಿನ ನಿಯಮ ಅನ್ವಯವಾಗುತ್ತದೆ.

ಅನುದಾನಿತ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿಗಳಿಗೆ:01.04.2006ರ ಪಿಂಚಣಿ ನೀತಿಯಲ್ಲಿ ಅನುದಾನಿತ ಶಾಲೆಗಳ ನೌಕರರಿಗೆ ಪಿಂಚಣಿ ಒದಗಿಸುವ ಕುರಿತು ಸರ್ಕಾರದ ಆದೇಶದ ಕ್ರಮ ಸಂಖ್ಯೆ: 8ರಲ್ಲಿ ಈ ಕೆಳಗಿನಂತೆ ಆದೇಶಿಸಿದೆ.

...(8) ಸಹಾಯಾನುದಾನದ ಶಿಕ್ಷಣ ಸಂಸ್ಥೆಗಳ ನೌಕರರಿಗೆ ಗೊತ್ತು ಮಾಡಿದ ಪ್ರಯೋಜನ ಪಿಂಚಣಿಯನ್ನು ದಿನಾಂಕ: 01.04.2006ರಂದು ಅಥವಾ ಅದರ ತರುವಾಯ ಸೇರುವ ಹೊಸದಾಗಿ ನೇಮಕಗೊಂಡ ಸಿಬ್ಬಂದಿಗೆ ನಿಲ್ಲಿಸಿದಿತಕ್ಕದ್ದು. ನೂತನ ನಿಗಧಿತ ವಂತಿಗೆ ಪಿಂಚಣಿ ಯೋಜನೆಯು, ಆಯ್ಕೆಯ ಅವಕಾಶದ ಆಧಾರದ ಮೇಲೆ ನೌಕರನಿಗೆ ನಿಯೋಜಕನಿಗೆ ಅನ್ವಯವಾಗತಕ್ಕದ್ದು ಮತ್ತು ಮತ್ತು ಆಯ್ಕೆಯ ಅವಕಾಶವನ್ನು ಇಬ್ಬರಿಂದಲೂ ಚಲಾಯಿಸತಕ್ಕದ್ದು, ಆದರೆ ನಿಯೋಜಕರ ವಂತಿಗೆಯನ್ನು ಸಂಬಂಧಪಟ್ಟ ಸಂಸ್ಥೆಗಳು ಭರಿಸತಕ್ಕದ್ದು. ಆದರೆ ರಾಜ್ಯ ಸರ್ಕಾರವಲ್ಲ. ಈ ಆದೇಶವು ದಿನಾಂಕ: 01.04.2006ರಿಂದ ಜಾರಿಗೆ ಬಂದಿರುತ್ತದೆ.

ಸರ್ಕಾರಿ ನೌಕರನ ಪ್ರಕರಣದಲ್ಲಿ ಸರ್ಕಾರದ ವಂತಿಕೆಯನ್ನು ಸರ್ಕಾರದಿಂದ ನೀಡಲಾಗುತ್ತಿದೆ. ಖಾಸಗಿ ಅನುದಾನಿತ ಶಾಲೆಯ ಸಿಬ್ಬಂದಿ ಪ್ರಕರಣದಲ್ಲಿ ಪ್ರಸ್ತುತದವರೆವಿಗೂ ನೂತನ ಪಿಂಚಣಿ ಯೋಜನೆಗಾಗಿ ನೌಕರನ ಮೂಲ ವೇತನದಲ್ಲಿ 10% ರಷ್ಟನ್ನು ಕಟಾಯಿಸುತ್ತಿರುವುದಿಲ್ಲ ಕುಲ್ಲ ಹಾಗೂ ನೌಕರನ ವಂತಿಕೆಯ ಅಷ್ಟೇ ಮೊತ್ತವನ್ನು [ಮೂಲವೇತನದ 10% ರಷ್ಟು] ಶಾಲಾ ಆಡಳಿತ ಮಂಡಳಿಗಳು ಸಹಾ ಭರಿಸುತ್ತಿರುವುದಿಲ್ಲ. ಆದುದರಿಂದ ಅನುದಾನಿತ ಶಾಲಾ ಸಿಬ್ಬಂದಿಗಳಿಗೆ ನಿವೃತ್ತಿ ನಂತರ ಪಿಂಚಣಿ ಪಡೆಯಲು ಸಾಧ್ಯವಾಗುತ್ತಿಲ್ಲ.

ಪ್ರಸ್ತುತ ಅನುದಾನಿತ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿಗಳಿಗೆ ಆಯಾ ಆಡಳಿತ ಮಂಡಳಿಯು ನೇಮಕಾತಿ ಪ್ರಾಧಿಕಾರವಾಗಿದ್ದು, ಸರ್ಕಾರ ಮತ್ತು ಸಿಬ್ಬಂದಿಗಳ ನಡುವೆ ಯಾವುದೇ ಉದ್ಯೋಗದಾತ ಮತ್ತು ಉದ್ಯೋಗಿ ಸಂಬಂಧವಿರುವುದಿಲ್ಲ, ದಿನಾಂಕ : 01-04-2006 ಕ್ಕೂ ಪೂರ್ವದಲ್ಲಿ ನೇಮಕಾತಿ ಹೊಂದಿದ ಅನುದಾನಿತ ಸಿಬ್ಬಂದಿಗಳ ಸಂಬಂಧದಲ್ಲಿ TBS ನಿಯಮಾವಳಿಗಳು ಅನ್ವಯವಾಗುತ್ತಿತ್ತು, ದಿನಾಂಕ : 01-04-2006 ರ ನಂತರ ನೇಮಕಾತಿ ಹೊಂದಿದ ಅನುದಾನಿತ ಸಿಬ್ಬಂದಿಗಳ ಸಂಬಂಧದಲ್ಲಿ ಈ ನಿಯಮಗಳು ಅನ್ವಯವಾಗುವುದಿಲ್ಲ.

ಆದುದರಿಂದ, ದಿನಾಂಕ : 01-04-2006 ರ ನಂತರ ನೇಮಕಾತಿ ಹೊಂದಿದ ಅನುದಾನಿತ ಸಿಬ್ಬಂದಿಗಳಿಗೆ ಪಿಂಚಣಿಯನ್ನು ಪಾವತಿಸುವುದು ಸರ್ಕಾರದ ಹೊಣೆಯಾಗಿರುವುದಿಲ್ಲ.

ಆದುದರಿಂದ, 2006ರ ಪೂರ್ವದಲ್ಲಿ ಅನುದಾನರಹಿತವಾಗಿ ನೇಮಕಗೊಂಡ ಸಿಬ್ಬಂದಿಗಳು ದಿನಾಂಕ: 01.04.2006ರ ನಂತರ ಅನುದಾನಕ್ಕೆ ಒಳಪಟ್ಟಲ್ಲಿ ಅಂತಹ ಸಿಬ್ಬಂದಿಗಳು ಹೊಸ ಪಿಂಚಣಿ ಯೋಜನೆ (NPS) ವ್ಯಾಪ್ತಿಗೆ ಒಳಪಡುತ್ತಾರೆ. ಈ ಪಿಂಚಣಿ ಯೋಜನೆಯು ಸಂಪೂರ್ಣವಾಗಿ ಸ್ವ-ಇಚ್ಛಾ ನೆಲೆಯಲ್ಲಿ ಪಿಂಚಣಿ (Optional) ಜಾರಿಗೊಳಿಸುವುದರಿಂದ ಕಡ್ಡಾಯಗೊಳಿಸಲು ಅವಕಾಶವಿರುವುದಿಲ್ಲ.

ಇಪಿ 31 ಎಸ್‌ಇಎಸ್ 2026

(ಎಸ್. ಮಧು ಬಂಗಾರಪ್ಪ )
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ
ಇಲಾಖಾ ಸಚಿವರು